# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ ವೈ.ಎಂ.ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 117 |
| ಉತ್ತರಿಸಬೇಕಾದ ದಿನಾಂಕ | 13-09-2022 |
| ಉತ್ತರಿಸಬೇಕಾದವರು | ನಗರಾಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಿಜಯನಗರ ಜಿಲ್ಲೆ, ಹೊಸಪೇಟೆ ತಾಲ್ಲೂಕು, ಮರಿಯಮ್ಮನಹಳ್ಳಿ ಪಟ್ಟಣದ ಜನತೆಗೆ ಕುಡಿಯುವ ನೀರನ್ನು 8-10 ದಿನಗಳಿಗೊಮ್ಮೆ ಬಿಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಪಟ್ಟಣದ ಜನರಿಗೆ ಕುಡಿಯುವ ನೀರಿನ ತೊಂದರೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ಮಾಹಿತಿ ನೀಡುವುದು) | ಬಂದಿದೆ.<br><br>ವಿಜಯನಗರ ಜಿಲ್ಲೆ ಹೊಸಪೇಟೆ ತಾಲ್ಲೂಕು ಮರಿಯಮ್ಮನಹಳ್ಳಿ ಪಟ್ಟಣದ ಕುಡಿಯುವ ನೀರು ಸರಬರಾಜು ನಿರ್ವಹಣೆಯನ್ನು ಪಟ್ಟಣ ಪಂಚಾಯಿತಿ ಮರಿಯಮ್ಮನಹಳ್ಳಿ ಇವರಿಂದ ನಿರ್ವಹಣೆ ಮಾಡಲಾಗುತ್ತಿದೆ. ಈಗಿರುವ ವ್ಯವಸ್ಥೆಯಿಂದ ಸಮರ್ಪಕವಾಗಿ ಕುಡಿಯುವ ನೀರು ಪೂರೈಸಲು ಸಾಧ್ಯವಾಗುತ್ತಿಲ್ಲದ ಕಾರಣ ಕುಡಿಯುವ ನೀರಿನ ತೊಂದರೆಯನ್ನು ನಿವಾರಿಸಲು ಈ ಕೆಳಕಂಡಂತೆ ಕ್ರಮ ವಹಿಸಲಾಗಿದೆ :<br><br>**ಕುಡಿಯುವ ನೀರಿನ ತೊಂದರೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮ :** |
| ಆ) | ಮರಿಯಮ್ಮನಹಳ್ಳಿ ಪಟ್ಟಣದ ಜನತೆಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಶಾಶ್ವತ ಕುಡಿಯುವ ನೀರನ್ನು ಒದಗಿಸುವಂತಾಗಲು ಯಾವುದಾದರೂ ಯೋಜನೆ ಕೈಗೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ಹಾಗಿದಲ್ಲಿ, ಮಾಹಿತಿ ನೀಡುವುದು) | ಪ್ರಸ್ತುತ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯಿಂದ ಪಾವಗಡ ಹಾಗೂ ಬಹು ಗ್ರಾಮ ಕುಡಿಯುವ ನೀರು ಯೋಜನೆಯನ್ನು ತುಂಗಭದ್ರ ಜಲಾಶಯವನ್ನು ಮೂಲವಾಗಿಟ್ಟುಕೊಂಡು ರೂಪಿಸಿದ್ದು ಯೋಜನೆಯು ಪ್ರಗತಿಯಲ್ಲಿದೆ. ಸದರಿ ನೀರು ಸರಬರಾಜು ಯೋಜನೆಯಡಿಯಲ್ಲಿ ಮರಿಯಮ್ಮನಹಳ್ಳಿ ಪಟ್ಟಣಕ್ಕೆ ನೀರು ಸರಬರಾಜು ಮಾಡಲು ವಿನ್ಯಾಸದಲ್ಲಿ ಹಾಗೂ ಅಂದಾಜು ಪಟ್ಟಿಯಲ್ಲಿ ಅವಕಾಶವಿಲ್ಲವೆಂದು ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯವರು ತಿಳಿಸಿರುತ್ತಾರೆ. |
| ಇ) | ಪಟ್ಟಣದ ಮೂಲಕ ಹಾದು ಹೋಗುವ ಪಾವಗಡ ಕುಡಿಯುವ ನೀರಿನ ಯೋಜನೆಯಿಂದ ಈ ಪಟ್ಟಣಕ್ಕೆ ಶಾಶ್ವತ | |

....2

| | | |
|---|---|---|
| | ಕುಡಿಯುವ ನೀರಿನ ಯೋಜನೆಯನ್ನು ಒದಗಿಸಲು ಸಾಧ್ಯವಿದೆಯೇ; ಈ ಕುರಿತು ಅಲ್ಲಿನ ಜನರು ಹೋರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಪಟ್ಟಣದ ಜನರಿಗೆ ಕುಡಿಯುವ ನೀರನ್ನು ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು; | ಮಂಡಳಿ ವತಿಯಿಂದ, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯಿಂದ ಪ್ರಗತಿಯಲ್ಲಿರುವ ಯೋಜನೆಯಲ್ಲಿ ನಿರ್ಮಿಸಲಾಗುವ ಜಾಕ್ ವೆಲ್‌ನಲ್ಲಿ ಕಚ್ಚಾ ನೀರು ಪಂಪ್‌ಸೆಟ್‌ಗಳನ್ನು ಅಳವಡಿಸಿ ಮರಿಯಮ್ಮನಹಳ್ಳಿ ಪಟ್ಟಣಕ್ಕೆ ನೀರು ಸರಬರಾಜು ಯೋಜನೆಯನ್ನು ರೂ.77.77 ಕೋಟಿಗಳಿಗೆ ಯೋಜನೆ ರೂಪಿಸಲಾಗಿದೆ. ಸದರಿ ಪ್ರಸ್ತಾವನೆಯನ್ನು ಮಂಡಳಿಯ ತಾಂತ್ರಿಕ ಸಲಹಾ ಮತ್ತು ಟೆಂಡರ್ ಪರಿಶೀಲನಾ ಸಮಿತಿಯ ಮತ್ತು ಮಂಡಳಿಯ ಸಭೆಯ ಮುಂದೆ ಮಂಡಿಸಿ, ಆಡಳಿತಾತ್ಮಕ ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸಿದ ನಂತರ ಅಗತ್ಯ ಕ್ರಮವಹಿಸಲಾಗುವುದು.<br><br>ಇದಲ್ಲದೆ ಮರಿಯಮ್ಮನಹಳ್ಳಿ ಪಟ್ಟಣದ ಪ್ರಸ್ತುತ ನೀರು ಸರಬರಾಜಿನ ಮಾಹಿತಿ ಹಾಗೂ ಅವಶ್ಯವಿರುವ ನೀರಿನ ಬೇಡಿಕೆ ಮಾಹಿತಿಯನ್ನು ಕೇಂದ್ರ ಪುರಸ್ಕೃತ ಯೋಜನೆಯಾದ ಅಮೃತ್ 2.0 ನ ವೆಬ್‌ಸೈಟ್ ನಲ್ಲಿ ನಗರ ನೀರು ಸಮತೋಲನ ಯೋಜನೆ (CWBP) upload ಮಾಡಲಾಗಿರುತ್ತದೆ. ಸದರಿ ಪ್ರಸ್ತಾವನೆಯನ್ನು ಮಂಡಳಿಯ ತಾಂತ್ರಿಕ ಸಲಹಾ ಮತ್ತು ಟೆಂಡರ್ ಪರಿಶೀಲನಾ ಸಮಿತಿಯ ಮತ್ತು ಮಂಡಳಿಯ ಸಭೆಯ ಮುಂದೆ ಮಂಡಿಸಿ, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆಗಾಗಿ ಸಲ್ಲಿಸಲಾಗುವುದು. ಸರ್ಕಾರದಿಂದ ಸದರಿ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ದೊರೆತ ನಂತರ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು 18-24 ತಿಂಗಳ ಕಾಲಾವಧಿ ಅವಶ್ಯವಿರುತ್ತದೆ. |
| ಈ) | ಪಾವಗಡ ಕುಡಿಯುವ ನೀರಿನ ಯೋಜನೆಯಿಂದ ಮರಿಯಮ್ಮನಹಳ್ಳಿ ಪಟ್ಟಣದ ಜನರಿಗೆ ಕುಡಿಯುವ ನೀರನ್ನು ಒದಗಿಸಲು ಸಾಧ್ಯವಿಲ್ಲದಿರುವುದಕ್ಕೆ ಕಾರಣವೇನು; ಕುಡಿಯುವ ನೀರನ್ನು ಒದಗಿಸಲು ಸಾಧ್ಯವಾದಲ್ಲಿ ಯಾವ ಕಾಲಮಿತಿಯಲ್ಲಿ ಈ ಯೋಜನೆಯನ್ನು ರೂಪಿಸಲಾಗುವುದು? (ವಿವರ ನೀಡುವುದು) | |

ಸಂಖ್ಯೆ : ನಅಇ 126 ಯುಎಂಎಸ್ 2022

(ಬಿ.ಎ.ಬಸವರಾಜ)
ನಗರಾಭಿವೃದ್ಧಿ ಸಚಿವರು